## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** KVG institute of Allied Health Sciences, Sullia ಕಾಲೇಜಿನಲ್ಲಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್‌ಗಳನ್ನು ಹೆಚ್ಚುವರಿಯಾಗಿ ಪ್ರಾರಂಭಿಸಲು ಸಂಯೋಜನೆ/ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: RGU/ACA/AFF/AHS/Addl./Incr./2024-25, ದಿನಾಂಕ:18.12.2024

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ, ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು Academy of Libaral Education Trust ಸಂಸ್ಥೆಯ KVG institute of Allied Health Sciences, Kurunjibhag, Sullia, D.K-574327 ಕಾಲೇಜಿನಲ್ಲಿ 30 ಸೀಟುಗಳ ಪ್ರವೇಶ ಮಿತಿಯುಳ್ಳ Bachelor of Public Health, 15 ಸೀಟುಗಳ ಪ್ರವೇಶಮಿತಿಯುಳ್ಳ M.Sc. Medical Laboratory Technology, 05 ಸೀಟುಗಳ ಪ್ರವೇಶಮಿತಿಯುಳ್ಳ M.Sc. Renal Dialysis Technology, 10 ಸೀಟುಗಳ ಪ್ರವೇಶಮಿತಿಯುಳ್ಳ M.Sc. Clinical Psychology ಮತ್ತು 05 ಸೀಟುಗಳ ಪ್ರವೇಶ ಮಿತಿಯುಳ್ಳ M.Sc. Medical Imaging Technology ಕೋರ್ಸುಗಳನ್ನು ಹೆಚ್ಚುವರಿಯಾಗಿ ಪ್ರಾರಂಭಿಸಲು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(2)ರಡಿ ಸಂಸ್ಥೆಯು ಸಲ್ಲಿಸಿದ್ದ ಅರ್ಜಿ, ಸ್ಥಳೀಯ ತಪಾಸಣಾ ಸಮಿತಿಯ ವರದಿ, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್ ಸಮಿತಿಯ ನಿರ್ಣಯವನ್ನು ಸಲ್ಲಿಸುತ್ತಾ, ಈ ಸಂಸ್ಥೆಗೆ ಮೇಲ್ಕಂಡ ಕೋರ್ಸ್‌ಗಳನ್ನು ಹೆಚ್ಚುವರಿಯಾಗಿ ಪ್ರಾರಂಭಿಸಲು ಅನುಮತಿ ನೀಡಬಹುದೆಂತ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ದಿನಾಂಕ:24.12.2024 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತಾಧಿಕಾರ ಸಮಿತಿ ಸಭೆಯಲ್ಲಿ ಪರಿಶೀಲಿಸಿ ಶಿಫಾರಸ್ಸು ಮಾಡಿದಂತೆ, Academy of Libaral Education Trust ಸಂಸ್ಥೆಯ KVG institute of Allied Health Sciences, Kurunjibhag, Sullia, Dakshina Kannada-574327 ಕಾಲೇಜಿನಲ್ಲಿ 30 ಸೀಟುಗಳ ಪ್ರವೇಶ ಮಿತಿಯುಳ್ಳ Bachelor of Public Health, 15 ಸೀಟುಗಳ ಪ್ರವೇಶಮಿತಿಯುಳ್ಳ M.Sc. Medical Laboratory Technology, 05 ಸೀಟುಗಳ ಪ್ರವೇಶಮಿತಿಯುಳ್ಳ M.Sc. Renal Dialysis Technology, 10 ಸೀಟುಗಳ ಪ್ರವೇಶಮಿತಿಯುಳ್ಳ M.Sc. Clinical Psychology ಮತ್ತು 05 ಸೀಟುಗಳ ಪ್ರವೇಶ ಮಿತಿಯುಳ್ಳ M.Sc. Medical Imaging Technology ಕೋರ್ಸುಗಳನ್ನು ಹೆಚ್ಚುವರಿಯಾಗಿ 2024-25ನೇ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆ/ಮಂಜೂರಾತಿಯನ್ನು ನೀಡಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 289 ಆರ್ ಜಿ ಯು 2024, ಬೆಂಗಳೂರು, ದಿನಾಂಕ:30.12.2024.**

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45(5) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ Academy of Libaral Education Trust ಸಂಸ್ಥೆಯ KVG institute of Allied Health Sciences, Kurunjibhag, Sullia, Dakshina Kannada - 574327 ಕಾಲೇಜಿನಲ್ಲಿ ಈ ಕೆಳಕಂಡ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳನ್ನು ಅವುಗಳ ಮುಂದೆ ನಮೂದಿಸಿರುವ ಸೀಟುಗಳ ಪ್ರವೇಶ ಮಿತಿಯೊಂದಿಗೆ 2024-25ನೇ ಸಾಲಿನಿಂದ ಹೆಚ್ಚುವರಿಯಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆ/ ಮಂಜೂರಾತಿಯನ್ನು ನೀಡಿ ಆದೇಶಿಸಿದೆ.

| ಕ್ರ.ಸಂ. | ಕೋರ್ಸ್‌ನ ಹೆಸರು | ಸೀಟುಗಳ ಸಂಖ್ಯೆ |
|---|---|---|
| 1 | Bachelor of Public Health | 30 |
| 2 | M.Sc. Medical Laboratory Technology | 15 |
| 3 | M.Sc. Renal Dialysis Technology | 05 |
| 4 | M.Sc. Clinical Psychology | 10 |
| 5 | M.Sc. Medical Imaging Technology | 05 |

## ಷರತ್ತು ಮತ್ತು ನಿಬಂಧನೆಗಳು

1. ಸರ್ಕಾರದ ಆದೇಶ ಹೊರಡಿಸಿದ ನಂತರ ಅಂದರೆ, 2024-25ನೇ ಶೈಕ್ಷಣಿಕ ಸಾಲಿನಿಂದ ಕೋರ್ಸ್‌ನ್ನು ಪ್ರಾರಂಭಿಸತಕ್ಕದ್ದು.

2. ಈ ಸಂಸ್ಥೆಯು ಮೇಲ್ಕಂಡ ಬ್ಯಾಚುಲರ್ ಆಫ್ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್‌ನ ಶೇ.20 ರಷ್ಟು ಮತ್ತು ಎಂ.ಎಸ್ಸಿ. ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್‌ನ ಶೇ.25 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.

3. ಮೇಲ್ಕಂಡ ಕೋರ್ಸ್‌ಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.

4. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಿಗದಿ ಪಡಿಸಿರುವ ಪರಿನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಸದರಿ ಟ್ರಸ್ಟ್/ಸಂಸ್ಥೆ/ಸಂಘವು ನರ್ಸಿಂಗ್/ಅಲೈಡ್ ಹೆಲ್ತ್ ಸೈನ್ಸ್/ಫಿಸಿಯೋಥೆರಪಿ ಕಾಲೇಜುಗಳನ್ನು ಪ್ರಾರಂಭಿಸಲು ಐ.ಎನ್.ಸಿ ನಿಯಮಾನುಸಾರ ಅಗತ್ಯವಿರುವ ಕಟ್ಟಡ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಬಗ್ಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು.

5. ಸದರಿ ಸಂಸ್ಥೆಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ ಪಡೆದ ನಂತರವೇ, ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೂ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991 ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

6. ರಾಜ್ಯ ಸರ್ಕಾರ ಮತ್ತು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

7. ಸದರಿ ಸಂಸ್ಥೆಯು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗಧಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆ ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

8. ವಿದ್ಯಾರ್ಥಿಗಳ ಪ್ರವೇಶವನ್ನು 2003ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸ್‌ಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸ್‌ನ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.

9. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.

10. ಟ್ರಸ್ಟ್/ಸಂಸ್ಥೆ/ಸಂಘಗಳು ಚಾಲ್ತಿಯಲ್ಲಿರುವ ಬಗ್ಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು.

11. ಟ್ರಸ್ಟ್/ಸಂಸ್ಥೆ/ಸಂಘಗಳು/ಇತ್ಯಾದಿಗಳನ್ನು ಬೇರೆಯವರಿಂದ ಖರೀದಿ/ಮಾರಾಟ ಮಾಡಿರುವುದಿಲ್ಲವೆಂಬ ಬಗ್ಗೆ, ಹಾಗೂ ನಿಯಮ ಉಲ್ಲಂಘನೆಯಾಗಿ ಮೂಲ ಟ್ರಸ್ಟಿಗಳಲ್ಲಿ ಯಾವುದೇ ಬದಲಾವಣೆಯಾಗಿಲ್ಲದೆ ಇರುವ ಬಗ್ಗೆ, ಸಂಬಂಧಪಟ್ಟ ಪ್ರಾಧಿಕಾರದಿಂದ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು.

12. ಸದರಿ ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜು ಪ್ರಾರಂಭಿಸಲು ಸ್ವಂತ ಆಸ್ಪತ್ರೆಯ ಸಮರ್ಪಕ ಕ್ಲಿನಿಕಲ್ ಸೌಲಭ್ಯ ಹೊಂದಿರುವ ಬಗ್ಗೆ, ಹಾಗೂ ಸದರಿ ಆಸ್ಪತ್ರೆ ನಿಯಮಾನುಸಾರ ಹಾಸಿಗೆ ಸಾಮರ್ಥ್ಯವನ್ನು ಹೊಂದಿರುವ ಬಗ್ಗೆ, ಸಂಬಂಧಪಟ್ಟ ಪ್ರಾಧಿಕಾರದಿಂದ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು.

13. ಸದರಿ ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜು ಪ್ರಾರಂಭಿಸಲು ನೀಡಿದ ಬೋಧಕ/ಬೋಧಕೇತರ ಸಿಬ್ಬಂದಿಯು ಬೇರೆ ಯಾವುದೇ ಸಂಸ್ಥೆಗಳಲ್ಲಿ ಪುನರಾವರ್ತನೆ ಆಗದಂತೆ ಆಧಾರ ಲಿಂಕ್ ಹಾಜರಾತಿ ಹೊಂದಿರುವ ಬಗ್ಗೆ, ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು.

14. ಸದರಿ ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳು ಐ.ಎನ್.ಸಿ. ಮತ್ತು ಸಂಬಂಧಪಟ್ಟ ಪ್ರಾಧಿಕಾರಗಳು ನಿಯಮಾನುಸಾರ ನಿಗಧಿಪಡಿಸಿರುವ ಶುಲ್ಕವನ್ನು ವಿದ್ಯಾರ್ಥಿಗಳಿಂದ ಪಡೆದುಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ, ಸಂಬಂಧಪಟ್ಟ ನರ್ಸಿಂಗ್/ಅಲೈಡ್ ಹೆಲ್ತ್ ಸೈನ್ಸಸ್ /ಫಿಸಿಯೋಥೆರಪಿ ಕಾಲೇಜುಗಳ ಸಂಯೋಜನೆ ಮಂಜೂರಾತಿಯನ್ನು ಹಿಂಪಡೆದು, ವಿಶ್ವವಿದ್ಯಾಲಯವು ಕಾನೂನು ಕ್ರಮಕೈಗೊಳ್ಳತಕ್ಕದ್ದು.

15. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, 1994 ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48 ನೇ ಪ್ರಕರಣದಲ್ಲಿ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆಯಕೊಳ್ಳಲಾಗುವುದು.

16. ಪ್ರತಿ ಸಂಸ್ಥೆಯಲ್ಲಿನ ಮಾನವ ಸಂಪನ್ಮೂಲದ ವಿವರಗಳನ್ನು ಆಯಾ ಸಂಸ್ಥೆಗಳ ವೆಬ್‌ಸೈಟ್‌ನಲ್ಲಿ ಕಡ್ಡಾಯವಾಗಿ ಪ್ರಕಟಿಸುವುದು. ಒಂದೇ ಸಿಬ್ಬಂದಿಯನ್ನು ಬೇರೆ-ಬೇರೆ ಸಂಸ್ಥೆಗಳಲ್ಲಿ ತೋರಿಸದಂತೆ ಕ್ರಮವಹಿಸತಕ್ಕದ್ದು.ಈ ಬಗ್ಗೆ, ವೇತನ ಚೀಟಿ ಹಾಗೂ ಫಾರ್ಮ್ -16ನ್ನು ಪರಿಶೀಲಿಸತಕ್ಕದ್ದು.

17. ಪ್ರತಿ ಕಾಲೇಜುಗಳು (ಫಿಸಿಯೋಥೆರಾಪಿ, ಅಲೈಡ್ ಹೆಲ್ತ್‌ಸೈನ್ಸಸ್, ನರ್ಸಿಂಗ್ ಕಾಲೇಜು) ಪ್ರತ್ಯೇಕ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳನ್ನು ಹೊಂದತಕ್ಕದ್ದು. ಮೂಲಭೂತ ಸೌಲಭ್ಯಗಳ ಬಗ್ಗೆ ಜಿಯೋ-ಟ್ಯಾಗಿಂಗ್ ಮಾಡತಕ್ಕದ್ದು.

18. ಮೇಲ್ಕಂಡ ಸಂಸ್ಥೆಗಳ ಬಗ್ಗೆ ಐ.ಎನ್.ಸಿ. ಮಾರ್ಗಸೂಚಿಯಲ್ಲಿನ ಯಾವುದೇ ಸೌಲಭ್ಯಗಳ ಬಗ್ಗೆ ಕೊರತೆ ಕಂಡುಬಂದಲ್ಲಿ, ಸ್ಥಳ ತಪಾಸಣಾ ಸಮಿತಿ ಹಾಗೂ ಆರ್.ಜಿ.ಯು.ಹೆಚ್.ಎಸ್. ಗಳೇ ನೇರ ಹೊಣೆಗಾರರಾಗತಕ್ಕದ್ದು.

19. ಸಂಸ್ಥೆಗಳು ಕ್ಲಿನಿಕಲ್ ಸೌಲಭ್ಯದ ಸಂಬಂಧ ತೋರಿಸುವ ಆಸ್ಪತ್ರೆಗಳಲ್ಲಿ ಇರುವ O.P.D./I.P.D. ಮಾಹಿತಿಯನ್ನು ನಮೂದಿಸತಕ್ಕದ್ದು.

20. ಐ.ಎನ್.ಸಿ. ಮಾರ್ಗಸೂಚಿಯನ್ವಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಬಗ್ಗೆ, ಕಾಲಕಾಲಕ್ಕೆ ಆರ್.ಜಿ.ಯು.ಹೆಚ್.ಎಸ್. ಖಚಿತಪಡಿಸಿಕೊಳ್ಳತಕ್ಕದ್ದು.

21. ಸದರಿ ನರ್ಸಿಂಗ್ ಕಾಲೇಜುಗಳು ಸಂಯೋಜನೆ/ಮಂಜೂರಾತಿ ಬಗ್ಗೆ, ಕಾಲಕಾಲಕ್ಕೆ ರಾಜ್ಯ ಸರ್ಕಾರ/ವಿಶ್ವವಿದ್ಯಾಲಯ/ಇತರೆ ಸಂಬಂಧಪಟ್ಟ ಪ್ರಾಧಿಕಾರಗಳು ಹೊರಡಿಸುವ ಸುತ್ತೋಲೆ / ಆದೇಶ / ನಿಯಮಗಳು / ಅಧಿಸೂಚನೆ / ವಿನಿಯಮಗಳು/ ಅಧಿನಿಯಮಗಳಲ್ಲಿನ ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸಿರುವ ಬಗ್ಗೆ, ವಿಶ್ವವಿದ್ಯಾಲಯವು ಆಗಿಂದಾಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು. ಉಲ್ಲಂಘನೆಯಾದಲ್ಲಿ ಅಥವಾ ತಪ್ಪು ಮಾಹಿತಿ ನೀಡಿದ್ದಲ್ಲಿ, ಸಂಬಂಧಪಟ್ಟ ನರ್ಸಿಂಗ್ ಕಾಲೇಜುಗಳು ಮತ್ತು

ಅದರ ಟ್ರಸ್ಟ್/ಸಂಸ್ಥೆ/ಸಂಘ/ಇತ್ಯಾದಿಗಳ ಮೇಲೆ ಹಾಗೂ ತಪಾಸಣಾ/ಶಿಫಾರಸ್ಸು ತಂಡದ ಸದಸ್ಯರ ಮೇಲೆ ವಿಶ್ವವಿದ್ಯಾಲಯವು ಕಾನೂನು ಕ್ರಮ ಜರುಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ. ಮಂಜುನಾಥ) 30/12/[illegible]
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ.

ಇವರಿಗೆ:

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ 4ನೇ ಟಿ ಬ್ಲಾಕ್ ಜಯನಗರ, ಬೆಂಗಳೂರು.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಂಸಿಆರ್‌ಐ ಹಳೆ ಕಟ್ಟಡ, ಕೆ.ಆರ್. ರಸ್ತೆ, ಬೆಂಗಳೂರು.
3. ಪ್ರಾಂಶುಪಾಲರು, KVG institute of Allied Health Sciences, Kurunjibhag, Sullia, Dakshina Kannad-574327
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು
3. ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು

K.V.G. INSTITUTE OF ALLIED HEALTH SCIENCES

| | |
|---|---|
| Inward No. 60 | Date: 17/03/22 |
| Section Asst. | |
| Office Supt. | |
| Registrar | |
| Principal | |

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೆ.ವಿ.ಜಿ. ಇನ್ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸಸ್, ದಕ್ಷಿಣ ಕನ್ನಡ ಈ ಕಾಲೇಜಿನಲ್ಲಿ 1] B.Sc. Cardiac Care Technology, 2] B.Sc. Respiratory Care Technology 3] Bachelor in Audiology & Speech Language Pathology ಕೋರ್ಸುಗಳನ್ನು 2021-22ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

---

**ಓದಲಾಗಿದೆ:**

ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ: RGU/ACA/AFF/AHS/Fr/KVG/2020-21 ದಿನಾಂಕ: 14/12/2020.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಕೆ.ವಿ.ಜಿ. ಇನ್ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸಸ್, ದಕ್ಷಿಣ ಕನ್ನಡ ಈ ಕಾಲೇಜಿನಲ್ಲಿ 1] B.Sc. Cardiac Care Technology, 2] B.Sc. Respiratory Care Technology 3] Bachelor in Audiology & Speech Language Pathology ಕೋರ್ಸುಗಳನ್ನು 2020-21ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45(2) ರಡಿ ಸಂಸ್ಥೆಯು ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿಯನ್ನು, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್ ನಿರ್ಣಯವನ್ನು ಸಲ್ಲಿಸುತ್ತಾ, ಈ ಸಂಸ್ಥೆಯಲ್ಲಿ ಮೇಲ್ಕಂಡ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವಂತೆ ತಮ್ಮ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 91 ಎಂಎಸ್‌ಎಫ್ 2021, ಬೆಂಗಳೂರು, ದಿನಾಂಕ: 11-03-2022**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45(5) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕೆ.ವಿ.ಜಿ. ಇನ್ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸಸ್, ದಕ್ಷಿಣ ಕನ್ನಡ ಈ ಕಾಲೇಜಿನಲ್ಲಿ 1] B.Sc. Cardiac Care Technology, 2] B.Sc. Respiratory Care Technology 3] Bachelor in Audiology & Speech Language Pathology ಕೋರ್ಸುಗಳನ್ನು ಅವುಗಳ ಮುಂದೆ ಸೂಚಿಸಿರುವ ಸೀಟುಗಳ ಪ್ರವೇಶಮಿತಿಯೊಂದಿಗೆ 2021-22ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮತಿಯನ್ನು ನೀಡಲಾಗಿದೆ.

| Sl. No. | Name of Courses | No. of Seats/Intake |
|---|---|---|
| 1. | B.Sc. Cardiac Care Technology | 10 Seats |
| 2. | B.Sc. Respiratory Care Technology | 10 Seats |
| 3. | Bachelor in Audiology & Speech Language Pathology | 20 Seats |

**ಷರತ್ತು ಮತ್ತು ನಿಬಂಧನೆಗಳು**

1. ಈ ಸಂಸ್ಥೆಯು ಮೇಲ್ಕಂಡ ಕೋರ್ಸಿನ ಶೇ.20 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.

2. ಮೇಲ್ಕಂಡ ಕೋರ್ಸುಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.
3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಕಡ್ಡಾಯವಾಗಿ ಹೊಂದತಕ್ಕದ್ದು.
4. ಸದರಿ ಸಂಸ್ಥೆಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ ಪಡೆದ ನಂತರವೇ, ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991 ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
5. ರಾಜ್ಯ ಸರ್ಕಾರ ಮತ್ತು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಸದರಿ ಸಂಸ್ಥೆಯು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗಧಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
7. ವಿದ್ಯಾರ್ಥಿಗಳ ಪ್ರವೇಶವನ್ನು 2003 ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸಿನ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
8. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
9. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, 1994 ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48 ನೇ ಪ್ರಕರಣದಲ್ಲಿ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ. ಶ್ರೀನಿಧಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ.

<u>ಇವರಿಗೆ:</u>

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, 4ನೇ 'ಟಿ'ಬ್ಲಾಕ್, ಬೆಂಗಳೂರು – 560 041.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
3. ಪ್ರಾಂಶುಪಾಲರು, KVG Institute of Allied Health Sciences, Kurunjibhag, Sullia, D.K.-574327
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿ:</u>

1. ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.

K V G Medical College
Sullia
Inward No 2614 Date 26/09/19
Section Asst
Manager
Principal

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೆ.ವಿ.ಜಿ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ, ಸುಳ್ಯ, ದಕ್ಷಿಣ ಕನ್ನಡ ಈ ಸಂಸ್ಥೆಯಲ್ಲಿ 2019-20ನೇ ಸಾಲಿನಿಂದ ಹೊಸದಾಗಿ ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸ್‌ಗಳನ್ನು ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

**ಓದಲಾಗಿದೆ:** ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಆರ್‌ಜಿಯು/ಎಸಿಎ/ಎಎಫ್‌ಎಫ್/ಎಹೆಚ್‌ಎಸ್/ಎಫ್‌ಆರ್/ಕೆವಿಜಿಎಂಸಿ/2019-20, ದಿನಾಂಕ:20.11.2018.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಕೆ.ವಿ.ಜಿ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ, ಸುಳ್ಯ, ದಕ್ಷಿಣ ಕನ್ನಡ ಈ ಸಂಸ್ಥೆಯಲ್ಲಿ ತಲಾ 20(ಇಪ್ಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ. ಇಮೇಜಿಂಗ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ. ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ಗಳನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡಲು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(2)ರಡಿ ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿ, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್‌ನ ಶಿಫಾರಸ್ಸುಗಳನ್ನು ಸಲ್ಲಿಸುತ್ತಾ ಈ ಸಂಸ್ಥೆಯಲ್ಲಿ 2019-20ನೇ ಸಾಲಿನಿಂದ ಮೇಲ್ಕಂಡ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಕೆ.ವಿ.ಜಿ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ, ಸುಳ್ಯ, ದಕ್ಷಿಣ ಕನ್ನಡ ಈ ಸಂಸ್ಥೆಯಲ್ಲಿ ತಲಾ 20(ಇಪ್ಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ. ಇಮೇಜಿಂಗ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ಗಳನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 160 ಎಂಪಿಎಸ್ 2019, ಬೆಂಗಳೂರು, ದಿನಾಂಕ:16.09.2019.**

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(5)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕೆ.ವಿ.ಜಿ. ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ, ಕುರಂಜಿಭಾಗ್, ಸುಳ್ಯ, ದಕ್ಷಿಣ ಕನ್ನಡ-574 327 ಈ ಸಂಸ್ಥೆಯಲ್ಲಿ ತಲಾ 20(ಇಪ್ಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ. ಇಮೇಜಿಂಗ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ. ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ಗಳನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

**ಷರತ್ತು ಮತ್ತು ನಿಬಂಧನೆಗಳು**

1. ಈ ಸಂಸ್ಥೆಯು ಮೇಲ್ಕಂಡ ಬಿ.ಎಸ್ಸಿ. ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸ್‌ಗಳ ಶೇ.20 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.

2. ಮೇಲ್ಕಂಡ ಕೋರ್ಸ್‌ಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.

3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಕಡ್ಡಾಯವಾಗಿ ಹೊಂದತಕ್ಕದ್ದು.

....2

4. ಸದರಿ ಕಾಲೇಜು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ ಪಡೆದ ನಂತರವೇ, ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೂ ಹೆಚ್ಚುವರಿ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದಲ್ಲಿ 1991ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ. ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

5. ರಾಜ್ಯ ಸರ್ಕಾರ ಮತ್ತು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

6. ಸದರಿ ಕಾಲೇಜು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗದಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ, ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

7. ವಿದ್ಯಾರ್ಥಿಗಳ ಪ್ರವೇಶವನ್ನು 2003ರ ಕರ್ನಾಟಕ ನರ್ಸಿಂಗ್, ಫಾರ್ಮಸಿ & ಫಿಜಿಯೋಥೆರಪಿ ಕೋರ್ಸ್‌ಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸುಗಳ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.

8. ಮೇಲ್ಕಂಡ ಕಾಲೇಜಿಗೆ ರಾಜ್ಯ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತವಾಗಿ ಅನುದಾನರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.

9. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ 1994ರ 48ನೇ ಪ್ರಕರಣದನ್ವಯ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

K. 16/09/19
(ಕೆ. ಮುರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

**ಇವರಿಗೆ:**

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ ಟಿ-ಬ್ಲಾಕ್, ಬೆಂಗಳೂರು.
3. ಪ್ರಾಂಶುಪಾಲರು/ಕಾರ್ಯದರ್ಶಿ/ಅಧ್ಯಕ್ಷರು, ಕೆ.ವಿ.ಜಿ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ, ಕುರಂಜಿಭಾಗ್, ಸುಳ್ಯ, ದಕ್ಷಿಣ ಕನ್ನಡ-574327.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.

K V G Medical College
Sullia
Inward No 8331 Date 23/11/19
Section Asst
Manager
Principal

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೆವಿಜಿ ಮೆಡಿಕಲ್ ಕಾಲೇಜು & ಆಸ್ಪತ್ರೆ, ಸುಳ್ಯ, ದಕ್ಷಿಣ ಕನ್ನಡ ಈ ಸಂಸ್ಥೆಯನ್ನು ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸ್‌ಗಳೊಂದಿಗೆ 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

**ಓದಲಾಗಿದೆ:** ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಆರ್‌ಜಿಯು/ಎಸಿಎ/ಎಎಫ್‌ಎಫ್/ಎಹೆಚ್‌ಎಸ್/ಎಫ್‌ಆರ್/ಕೆವಿಜಿ/2019-20, ದಿ:29.08.2019.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಕೆವಿಜಿ ಮೆಡಿಕಲ್ ಕಾಲೇಜು & ಆಸ್ಪತ್ರೆ, ಸುಳ್ಯ, ದಕ್ಷಿಣ ಕನ್ನಡ ಈ ಸಂಸ್ಥೆಯನ್ನು ತಲಾ 20(ಇಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ ರೀನಲ್ ಡಯಾಲಿಸಿಸ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ ಆಪ್ಟಮೆಟ್ರಿ ಕೋರ್ಸ್‌ಗಳೊಂದಿಗೆ ಹಾಗೂ ತಲಾ 10(ಹತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ ಅನೇಸ್ಥೇಷಿಯಾ ಟೆಕ್ನಾಲಜಿ, ಬಿ.ಎಸ್ಸಿ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ ಎಮರ್ಜೆನ್ಸಿ ಮೆಡಿಸಿನ್ ಕೋರ್ಸ್‌ಗಳೊಂದಿಗೆ 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಿ ಸಂಯೋಜನೆ ನೀಡಲು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(2)ರಡಿ ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿ, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್‌ನ ಶಿಫಾರಸ್ಸುಗಳನ್ನು ಸಲ್ಲಿಸುತ್ತಾ, ಈ ಸಂಸ್ಥೆಯನ್ನು 2019-20ನೇ ಸಾಲಿನಿಂದ ಮೇಲ್ಕಂಡ ಕೋರ್ಸ್‌ಗಳೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಕೆವಿಜಿ ಮೆಡಿಕಲ್ ಕಾಲೇಜು & ಆಸ್ಪತ್ರೆ, ಕುರುಂಜಿ ಭಾಗ್, ಸುಳ್ಯ, ದಕ್ಷಿಣ ಕನ್ನಡ-574 327 ಈ ಸಂಸ್ಥೆಯನ್ನು ತಲಾ 20(ಇಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ ರೀನಲ್ ಡಯಾಲಿಸಿಸ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ ಆಪ್ಟಮೆಟ್ರಿ ಕೋರ್ಸ್‌ಗಳೊಂದಿಗೆ ಹಾಗೂ ತಲಾ 10(ಹತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ ಅನೇಸ್ಥೇಷಿಯಾ ಟೆಕ್ನಾಲಜಿ, ಬಿ.ಎಸ್ಸಿ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ ಎಮರ್ಜೆನ್ಸಿ ಮೆಡಿಸಿನ್ ಕೋರ್ಸ್‌ಗಳೊಂದಿಗೆ 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ ಎಂಇಡಿ 297 ಎಂಪಿಎಸ್ 2019, ಬೆಂಗಳೂರು, ದಿನಾಂಕ:08.11.2019.**

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(5)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕೆವಿಜಿ ಮೆಡಿಕಲ್ ಕಾಲೇಜು & ಆಸ್ಪತ್ರೆ, ಕುರುಂಜಿ ಭಾಗ್, ಸುಳ್ಯ, ದಕ್ಷಿಣ ಕನ್ನಡ-574 327 ಈ ಸಂಸ್ಥೆಯನ್ನು ತಲಾ 20(ಇಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ ರೀನಲ್ ಡಯಾಲಿಸಿಸ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ ಆಪ್ಟಮೆಟ್ರಿ ಕೋರ್ಸ್‌ಗಳೊಂದಿಗೆ ಹಾಗೂ ತಲಾ 10(ಹತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಎಸ್ಸಿ ಅನೇಸ್ಥೇಷಿಯಾ ಟೆಕ್ನಾಲಜಿ, ಬಿ.ಎಸ್ಸಿ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಮತ್ತು ಬಿ.ಎಸ್ಸಿ ಎಮರ್ಜೆನ್ಸಿ ಮೆಡಿಸಿನ್ ಕೋರ್ಸ್‌ಗಳೊಂದಿಗೆ 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

**ಷರತ್ತು ಮತ್ತು ನಿಬಂಧನೆಗಳು**

1. ಈ ಸಂಸ್ಥೆಯು ಮೇಲ್ಕಂಡ ಕೋರ್ಸಿನ ಶೇ.20 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ಮೇಲ್ಕಂಡ ಕೋರ್ಸ್‌ಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.

3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಕಡ್ಡಾಯವಾಗಿ ಹೊಂದತಕ್ಕದ್ದು.

4. ಸದರಿ ಕಾಲೇಜು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ ಪಡೆದ ನಂತರವೇ, ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೂ ಹೆಚ್ಚುವರಿ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದಲ್ಲಿ 1991ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

5. ರಾಜ್ಯ ಸರ್ಕಾರ ಮತ್ತು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

6. ಸದರಿ ಕಾಲೇಜು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗದಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ, ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

7. ವಿದ್ಯಾರ್ಥಿಗಳ ಪ್ರವೇಶವನ್ನು 2003ರ ಕರ್ನಾಟಕ ನರ್ಸಿಂಗ್, ಫಾರ್ಮಸಿ & ಫಿಜಿಯೋಥೆರಪಿ ಕೋರ್ಸ್‌ಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸುಗಳ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.

8. ಮೇಲ್ಕಂಡ ಕಾಲೇಜಿಗೆ ರಾಜ್ಯ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತವಾಗಿ ಅನುದಾನರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.

9. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ 1994ರ 48ನೇ ಪ್ರಕರಣದನ್ವಯ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

8/11/2017

(ಜಿ.ಬಿ. ಮಾರುತಿ ಪ್ರಸನ್ನ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ 4-ಬ್ಲಾಕ್, ಬೆಂಗಳೂರು.
3. ಪ್ರಾಂಶುಪಾಲರು/ಕಾರ್ಯದರ್ಶಿ/ಅಧ್ಯಕ್ಷರು, ಕೆವಿಜಿ ಮೆಡಿಕಲ್ ಕಾಲೇಜು & ಆಸ್ಪತ್ರೆ, ಕುರುಂಜಿ ಭಾಗ್, ಸುಳ್ಯ, ದಕ್ಷಿಣ ಕನ್ನಡ-574 327.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ,

1) ಮಾನ್ಯ ಉಪ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3) ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.

K. V. G. INSTITUTE OF
ALLIED HEALTH SCIENCES
Inward No. 08 Date: 09/01/2024
Section Asst.
Office Supt.
Registrar

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** K V G Institute of Allied Health Sciences, Kurunjibhag, Sullia ಈ ಕಾಲೇಜಿನಲ್ಲಿ Bachelor of Occupational Therapy ಹೆಚ್ಚುವರಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್‌ನ್ನು 2023-24ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**

ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ: RGU/AFF/AHS/Fr/KVG/2022-23, ದಿನಾಂಕ:11.05.2023

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು K V G Institute of Allied Health Sciences, Kurunjibhag, Sullia ಈ ಕಾಲೇಜಿನಲ್ಲಿ Bachelor of Occupational Therapy ಅಲೈಡ್ ಹೆಲ್ತ್ ಸೈನ್ಸ್ ಹೆಚ್ಚುವರಿ ಕೋರ್ಸ್‌ನ್ನು 10 ಸೀಟುಗಳ ಪ್ರವೇಶ ಮಿತಿಯೊಂದಿಗೆ 2022-23ನೇ ಸಾಲಿನಿಂದ ಅನ್ವಯವಾಗುವಂತೆ ಪ್ರಾರಂಭಿಸಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(2)ರಡಿ ಸಂಸ್ಥೆಯು ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿಯನ್ನು ಮತ್ತು ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್ ನಿರ್ಣಯವನ್ನು ಸಲ್ಲಿಸಿ, ಈ ಸಂಸ್ಥೆಯಲ್ಲಿ Bachelor of Occupational Therapy ಹೆಚ್ಚುವರಿ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಅವರ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, K V G Institute of Allied Health Sciences, Kurunjibhag, Sullia ಈ ಕಾಲೇಜಿನಲ್ಲಿ Bachelor of Occupational Therapy ಹೆಚ್ಚುವರಿ ಕೋರ್ಸ್‌ನ್ನು 10 ಸೀಟುಗಳ ಪ್ರವೇಶ ಮಿತಿಯೊಂದಿಗೆ 2023-24ನೇ ಸಾಲಿನಿಂದ ಅನ್ವಯವಾಗುವಂತೆ ಪ್ರಾರಂಭಿಸಲು ಸಂಯೋಜನಾದೇಶ ನೀಡಲು ಅನುಮತಿ ನೀಡಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಎಂಇಡಿ 275 ಎಂಎಸ್‌ಎಫ್ 2023, ಬೆಂಗಳೂರು,**

**ದಿನಾಂಕ:10-11-2023**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45(5)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ K V G Institute of Allied Health Sciences, Kurunjibhag, Sullia ಈ ಕಾಲೇಜಿನಲ್ಲಿ Bachelor of Occupational Therapy ಹೆಚ್ಚುವರಿ ಕೋರ್ಸ್‌ನ್ನು 10 ಸೀಟುಗಳ ಪ್ರವೇಶ ಮಿತಿಯೊಂದಿಗೆ 2023-24ನೇ ಸಾಲಿನಿಂದ ಅನ್ವಯವಾಗುವಂತೆ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಂಬಂಧನೆಗಳಿಗೊಳಪಟ್ಟು ಸಂಯೋಜನಾ ಆದೇಶ ನೀಡಲು ಮಂಜೂರಾತಿ ನೀಡಿ ಆದೇಶಿಸಿದೆ

**ಷರತ್ತು ಮತ್ತು ನಿಬಂಧನೆಗಳು**

1. ಸರ್ಕಾರ ಈ ಆದೇಶ ಹೊರಡಿಸಿದ ನಂತರ ಅಂದರೆ 2023-24ನೇ ಶೈಕ್ಷಣಿಕ ಸಾಲಿನಿಂದ ಕೋರ್ಸ್‌ನ್ನು ಹೆಚ್ಚುವರಿಯಾಗಿ ಪ್ರಾರಂಭಿಸತಕ್ಕದ್ದು.
2. ಸದರಿ ಕೋರ್ಸ್‌ಗೆ 2023-24ನೇ ಶೈಕ್ಷಣಿಕ ಸಾಲಿಗಿಂತ ಹಿಂದಿನ ಸಾಲಿನಲ್ಲಿ ಯಾವುದೇ ವಿದ್ಯಾರ್ಥಿಗಳ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ.

3. ಈ ಹಿಂದಿನ ಸಾಲಿನ ಪ್ರವೇಶಾತಿ ಸಂಬಂಧ ಮಾನ್ಯ ನ್ಯಾಯಾಲಯಕ್ಕಾಗಲೀ ಹಾಗೂ ಇತರೆ ಪ್ರಾಧಿಕಾರಕ್ಕಾಗಲೀ ಅನುಮತಿ/ನಿರ್ದೇಶನ ಮನವಿ/ಅರ್ಜಿ ಸಲ್ಲಿಸತಕ್ಕದ್ದಲ್ಲ.
4. ಈ ಸಂಸ್ಥೆಯು ಮೇಲ್ಕಂಡ ಕೋರ್ಸಿನ ಶೇ.20 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
5. ಮೇಲ್ಕಂಡ ಕೋರ್ಸುಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.
6. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯವು ನಿಗಧಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಕಡ್ಡಾಯವಾಗಿ ಹೊಂದತಕ್ಕದ್ದು.
7. ಸದರಿ ಸಂಸ್ಥೆಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ ಪಡೆದ ನಂತರವೇ, ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು, ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
8. ರಾಜ್ಯ ಸರ್ಕಾರ ಮತ್ತು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
9. ಸದರಿ ಸಂಸ್ಥೆಯು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗಧಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು, ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
10. ವಿದ್ಯಾರ್ಥಿಗಳ ಪ್ರವೇಶವನ್ನು 2003ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸಿನ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
11. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
12. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, 1994ರ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48ನೇ ಪ್ರಕರಣದಲ್ಲಿ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಮಂಜುನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ.

<u>ಇವರಿಗೆ:</u>

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, 4ನೇ 'ಟಿ'ಬ್ಲಾಕ್, ಬೆಂಗಳೂರು-560041.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಂಸಿಆರ್ಐ ಹಳೇ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು.

3. Principal, K V G Institute of Allied Health Sciences, Kurunjibhag, Sullia, Dakshina Kannada-574327
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.